uploaded

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನ ಆಯವ್ಯಯ ಕಂಡಿಕೆ-204(f)ರಲ್ಲಿ ಘೋಷಿಸಿದಂತೆ ಸಂಜೀವಿನಿ-ಕೆಎಸ್ಆರ್ಎಲ್‌ಪಿಎಸ್ ಸಂಸ್ಥೆಯಡಿಯಲ್ಲಿ Micro Culsters ಅಭಿವೃದ್ಧಿ ಪಡಿಸಲು ಅನುದಾನ ಒದಗಿಸುವ ಕುರಿತು.

**ಓದಲಾಗಿದೆ:** 1. 2022-23ನೇ ಸಾಲಿನ ಆಯವ್ಯಯ ಘೋಷಣ ಕಂಡಿಕೆ-204(f)

2.ಸಂಜೀವಿನಿ-ಕೆಎಸ್ಆರ್ಎಲ್‌ಪಿಎಸ್ ಇವರ ಏಕ ಕಡತ ಸಂಖ್ಯೆ:kSRLPS/LH-NF/38/2021-22

3.ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 277 ವೆಚ್ಚ-9/2022, ದಿನಾಂಕ:08-04-2022

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ:1ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿದ 2022-23ನೇ ಸಾಲಿನ ಆಯವ್ಯಯ ಭಾಷಣದ ಘೋಷಣ ಕಂಡಿಕೆ-204(f)ರಲ್ಲಿ ವೇತನ, ವಹಿವಾಟು, ಉದ್ಯೋಗ ಮತ್ತು ರಫ್ತು ಹೆಚ್ಚಳ ಗುರಿಯೊಂದಿಗೆ ಚಿಕ್ಕಬಳ್ಳಾಪುರದಲ್ಲಿ ಚರ್ಮದ ಬೊಂಬೆ, ಧಾರವಾಡದಲ್ಲಿ ಕಸೂತಿ, ಕೊಪ್ಪಳದಲ್ಲಿ ಕೌದಿ ಮತ್ತು ಕಿನ್ನಾಳ ಬೊಂಬೆ, ಮೈಸೂರಿನಲ್ಲಿ ಅಗರಬತ್ತಿ, ನವಲಗುಂದದಲ್ಲಿ ಜಮಖಾನಾ, ಚನ್ನಪಟ್ಟಣದಲ್ಲಿ ಆಟಿಕೆ, ಇಳಕಲ್—ಗುಳೇದಗುಡ್ಡ, ಬೆಳಗಾವಿ-ಶಹಾಪುರ, ಶಿಡ್ಲಘಟ್ಟ ಮತ್ತು ಮೊಳಕಾಲ್ಮೂರಗಳಲ್ಲಿ ಸೀರೆ ಮೈಕ್ರೋಕ್ಲಸ್ಟರ್ ಅನ್ನು ಅಭಿವೃದ್ಧಿಪಡಿಸಲಾಗುವುದು ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ:2ರಲ್ಲಿ ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಜೀವನೋಪಾಯ DAY-NRLM ಇವರು ದೀನ್ ದಯಾಳ ಅಂತ್ಯೋದಯ ಯೋಜನೆ ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಕಾರ್ಯಕ್ರಮಗಳ ಅಡಿಯಲ್ಲಿ ಕೃಷಿಯೇತರ ಕಿರು ಉದ್ಯಮಗಳನ್ನು ಉತ್ತೇಜಿಸುವುದು ಮತ್ತು ಬಲಪಡಿಸುವುದು ಮತ್ತು ಅನುಷ್ಠಾನಗೊಳಿಸುವುದು ಪ್ರಮುಖ ಕಾರ್ಯತಂತ್ರವಾಗಿದೆ. 2022-23 ರಲ್ಲಿ, ಸಂಸ್ಥೆಯು ಜೀವನೋಪಾಯದ ಭಾಗವಾಗಿ ಕೈಗೊಂಡ ಕೃಷಿಯೇತರ ಚಟುವಟಿಕೆಗಳ ಯಶಸ್ವಿ ಮಾದರಿಗಳನ್ನು ಅಳೆಯುವ ಗುರಿಯನ್ನು ಹೊಂದಿದೆ, ಇದು ಬಲವಾದ ಸಾಮಾಜಿಕ ಮತ್ತು ಆರ್ಥಿಕ ಬಂಡವಾಳವನ್ನು ನಿರ್ಮಿಸುವುದು ಹೇಗೆ ಹೆಚ್ಚಿನ ಮೌಲ್ಯದ ಕೃಷಿಯೇತರ ಸರಕುಗಳ ಪ್ರಚಾರಕ್ಕಾಗಿ ಉಡಾವಣಾ ಪ್ಯಾಡ್ ಅನ್ನು ಒದಗಿಸುತ್ತದೆ ಎಂಬುದನ್ನು ಪ್ರದರ್ಶಿಸುತ್ತದೆ. ಮತ್ತು ಮಾರುಕಟ್ಟೆ ಪ್ರವೇಶ, ಗ್ರಾಮೀಣ ಉದ್ಯಮ ಮತ್ತು ಕೌಶಲ್ಯ ಅಭಿವೃದ್ಧಿ ಮತ್ತು ಡಿಜಿಟಲ್ ನಾವೀನ್ಯತೆಗಳ ಪರಿಚಯದಲ್ಲಿನ ಸುಧಾರಣೆಗಳ ಮೂಲಕ ಮೌಲ್ಯ ಸರಪಳಿ ಅಭಿವೃದ್ಧಿ. ಪ್ರಸ್ತುತ ಅನೌಪಚಾರಿಕ ಕ್ಲಸ್ಟರ್‌ಗಳನ್ನು ಆರ್ಥಿಕವಾಗಿ ಲಾಭದಾಯಕ ಕ್ಲಸ್ಟರ್‌ಗಳನ್ನಾಗಿ ಮಾಡಲು ಆಯ್ದ ಉತ್ಪನ್ನಗಳಿಗೆ ಸುಸ್ಥಿರ ಮೌಲ್ಯ ಸರಪಳಿ ಮತ್ತು ಪೂರೈಕೆ ಸರಪಳಿಯನ್ನು ಅಭಿವೃದ್ಧಿಪಡಿಸಲು ಸಂಸ್ಥೆಯು ಉದ್ದೇಶಿಸಿದೆ. ರಾಷ್ಟ್ರೀಯ ಜೀವನೋಪಾಯ ಮಿಷನ್ ಅಡಿಯಲ್ಲಿ ಪ್ರತಿ ಮೈಕ್ರೋ ಕ್ಲಸ್ಟರ್‌ಗಳಲ್ಲಿ ಸುಸ್ಥಿರ ಕುಶಲಕರ್ಮಿ ಕ್ಲಸ್ಟರ್ ಅನ್ನು ಸ್ಥಾಪಿಸುವ ಉದ್ದೇಶದಿಂದ ಆಯ್ದ ಕ್ಲಸ್ಟರ್‌ಗಳಲ್ಲಿ ಅಂತ್ಯದಿಂದ ಕೊನೆಯವರೆಗೆ ಕ್ಲಸ್ಟರ್ ಅಭಿವೃದ್ಧಿ ಚಟುವಟಿಕೆಗಳನ್ನು ಕೈಗೊಳ್ಳಲು ಕುಶಲಕರ್ಮಿಗಳ ಮಾಲೀಕತ್ವವನ್ನು

--2

8.

ಖಾತ್ರಿಪಡಿಸುವುದು ಮತ್ತು ಸ್ಥಳೀಯ ಮೌಲ್ಯವರ್ಧನೆಗಾಗಿ ಸಾಮಾನ್ಯ ಸೌಲಭ್ಯ ಕೇಂದ್ರಗಳನ್ನು (ತಾಂತ್ರಿಕ ಆವಿಷ್ಕಾರದೊಂದಿಗೆ) ಸ್ಥಾಪಿಸುವುದು, ಮಾರುಕಟ್ಟೆ-ನೇತೃತ್ವದ ಉತ್ಪನ್ನ ಬಂಡವಾಳವನ್ನು **(Portfolio)** ಅಭಿವೃದ್ಧಿಪಡಿಸುವುದು ಮತ್ತು ಮಾರುಕಟ್ಟೆಯ ಕಾರ್ಯತಂತ್ರದಿಂದ ವೇತನ, ಆದಾಯ, ಉದ್ಯೋಗದ ದಿನಗಳ ಸಂಖ್ಯೆಯನ್ನು ಸಮೂಹಗಳಲ್ಲಿ ಹೆಚ್ಚಿಸಲು ಸಹ ಉದ್ದೇಶಿಸಿದೆ. ಈ ಹಿನ್ನೆಲೆಯಲ್ಲಿ ಈ ಎಲ್ಲಾ ಕಾರ್ಯಕ್ರಮಗಳ ಅನುಷ್ಠಾನಕ್ಕಾಗಿ ಹೆಚ್ಚುವರಿಯಾಗಿ ರೂ.10.00ಕೋಟಿ ಅನುದಾನಗಳನ್ನು ಬಿಡುಗಡೆ ಮಾಡಲು ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ:3ರಲ್ಲಿ ಆರ್ಥಿಕ ಇಲಾಖೆಯು 2022-23ನೇ ಸಾಲಿನ ಆಯವ್ಯಯ ಕಂಡಿಕೆ-204(ಉ)ಅನ್ನು ದಿನಾಂಕ:05-04-2022ರಂದು ಆರ್ಥಿಕ ಇಲಾಖೆಯಿಂದ ಹೊರಡಿಸಲಾದ ಆಯವ್ಯಯ ಸಲಹಾ ಟಿಪ್ಪಣಿ ಸಂಖ್ಯೆ:ಆಇ 26 ವೆಚ್ಚ-9/2022ರನ್ವಯ ಹಾಗೂ ಪ್ರಸ್ತುತ ಸಾಲಿನ NRLM ಕ್ರಿಯಾ ಯೋಜನೆಯ ಒಂದು ಭಾಗವಾಗಿ ಅನುಷ್ಠಾನಗೊಳಿಸಲು ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡಂತೆ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಕೌಉಜೀಇ 55 ಉಜೀಇ 2022, ಬೆಂಗಳೂರು,**

**ದಿನಾಂಕ:12-04-2022**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನಲೆಯಲ್ಲಿ ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿದ 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-204(f)ರಲ್ಲಿ ಘೋಷಿಸಿರುವಂತೆ ವೇತನ, ವಹಿವಾಟು, ಉದ್ಯೋಗ ಮತ್ತು ರಫ್ತು ಹೆಚ್ಚಳ ಗುರಿಯೊಂದಿಗೆ ಚಿಕ್ಕಬಳ್ಳಾಪುರದಲ್ಲಿ ಚರ್ಮದ ಬೊಂಬೆ, ಧಾರವಾಡದಲ್ಲಿ ಕಸೂತಿ, ಕೊಪ್ಪಳದಲ್ಲಿ ಕೌದಿ ಮತ್ತು ಕಿನ್ನಾಳ ಬೊಂಬೆ, ಮೈಸೂರಿನಲ್ಲಿ ಅಗರಬತ್ತಿ, ನವಲಗುಂದದಲ್ಲಿ ಜಮಖಾನಾ, ಚನ್ನಪಟ್ಟಣದಲ್ಲಿ ಆಟಿಕೆ, ಇಳಕಲ್—ಗುಳೇದಗುಡ್ಡ, ಬೆಳಗಾವಿ-ಶಹಾಪುರ, ಶಿಡ್ಲಘಟ್ಟ ಮತ್ತು ಮೊಳಕಾಲ್ಮೂರುಗಳಲ್ಲಿ ಸೀರೆ ಮೈಕ್ರೋಕ್ಲಸ್ಟರ್ ಅಭಿವೃದ್ಧಿಪಡಿಸಲು ಹಾಗೂ ಕಾರ್ಯಕ್ರಮಗಳನ್ನು ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ (NRLM) ಸಂಸ್ಥೆಯಿಂದ ಅನುಷ್ಠಾನಗೊಳಿಸಲು ತಾತ್ವಿಕ ಅನುಮೋದನೆ ನೀಡಿ ಆದೇಶಿಸಿದೆ.

**ಷರತ್ತು:-**

ಸದರಿ ಯೋಜನೆಯನ್ನು ಪ್ರಸ್ತುತ ಸಾಲಿನ NRLM ಕ್ರಿಯಾ ಯೋಜನೆಯ ಒಂದು ಭಾಗವಾಗಿ ಅನುಷ್ಠಾನಗೊಳಿಸುವುದು.

ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಹೆಚ್ಚುವರಿ ಅನುದಾಕ್ಕಾಗಿ ಪ್ರತ್ಯೇಕ ಪ್ರಸ್ತಾವನೆಯನ್ನು ಸಲ್ಲಿಸುವುದು.

ಏಕ ಕಡತ ಸಂಖ್ಯೆ:KSRLPS/LH-NF/38/2021-22ರಲ್ಲಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿನ ಮಾರ್ಗಸೂಚಿಗಳನ್ವಯ ಯೋಜನೆಗಳನ್ನು ಅನುಷ್ಠಾನಗೊಳಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 277 ವೆಚ್ಚ-9/2022, ದಿ:08-04-2022 ಹಾಗೂ ಯೋಜನಾ ಇಲಾಖೆ ಟಿಪ್ಪಣಿ ಸಂಖ್ಯೆ:PDS/30/MED/2022, ದಿ:08-04-2022ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ.

12/04/2022

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ), ಕರ್ನಾಟಕ ಬೆಂಗಳೂರು.
2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ (ಜಿಟಿಟಿಸಿ) ಬೆಂಗಳೂರು.
4. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಉಪ ನಿರ್ದೇಶಕರು, ಖಜಾನೆ ಎನ್.ಎಂ.ಸಿ ಖನಿಜ ಭವನ, ರೇಸ್ ಕೋರ್ಸ್‌ರೋಡ್, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ 3& 9, ವಿಧಾನ ಸೌಧ ಬೆಂಗಳೂರು.

**ಪ್ರತಿ:-**

1. ಮಾನ್ಯ ಉಪಮುಖ್ಯಮಂತ್ರಿ ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
3. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
4. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
5. ಅಧೀಕ್ಷಕರು, ಶಾಖೆ-1, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.